ಶಾಸನ ರಚನೆ

ವಿಧೇಯಕಗಳ ಮಂಡನೆ ಹಾಗೂ ಅಂಗೀಕಾರ

ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ (ತಿದ್ದುಪಡಿ) ವಿಧೇಯಕ, 1999.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ. ಸೋಮಶೇಖರ್ (ಕಂದಾಯ ಮಂತ್ರಿಯವರು) : ಮಾನ್ಯ ಅಧ್ಯಕ್ಷರೇ, 1999ರ ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "1999ರ ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ. ಸೋಮಶೇಖರ್ (ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1999ರ ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆಯ ನಿಷೇಧ (ತಿದ್ದುಪಡಿ) ವಿಧೇಯಕವನ್ನು ನಾನು ಈ ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ - I X)

ಶ್ರೀ ಕೆ.ಎಸ್. ಈಶ್ವರಪ್ಪ : ಮಾನ್ಯ ಅಧ್ಯಕ್ಷರೇ, ಇನ್ನು ಸೋಮವಾರ ಉಳಿದುದ್ದನ್ನು ತೆಗೆದುಕೊಳ್ಳಿ.

ಅಧ್ಯಕ್ಷರು : ಸೋಮವಾರ ಆಗುವುದಿಲ್ಲ. ಈ ಬೇಡಿಕೆಗಳ ಮೇಲೆ ಇನ್ನೂ ಮಾತನಾಡುವವರು ಇದ್ದಾರೆ. ಮಂಗಳವಾರದ ಮಧ್ಯಾಹ್ನದ ನಂತರ ನಾವು ಏನಿದ್ದರೂ ಸ್ವೀಚಸ್‌ಗೆ ಮಾತ್ರ ಕನ್‌ಪ್ಲೈಸ್ ಮಾಡಿಕೊಳ್ಳುತ್ತೇವೆ. ಸೋಮವಾರ ಪೂರ್ತಿ ದಿವಸ ಮಾತನಾಡುವುದಕ್ಕೆ ಆಗುತ್ತದೆ. ನಿನ್ನೆ ಇವತ್ತು ಶೂನ್ಯವೇಳೆಗೆ ಅವಕಾಶ ಮಾಡಿಲ್ಲ. ಅದಕ್ಕೋಸ್ಕರ ಇವತ್ತು ಒಂದು ದಿನ ಸ್ವಲ್ಪ ಕುಳಿತು ತಾವೆಲ್ಲರೂ ಸಹಕಾರ ಕೊಡಿ. ಇದನ್ನೆಲ್ಲಾ ಮುಗಿಸಿಬಿಡೋಣ. ಇವತ್ತು ಬಿಟ್ಟರೆ ಮತ್ತೆ ಸಮಯವಿಲ್ಲ.

ಪರ್ಯಾಲೋಚನಾ ಪ್ರಸ್ತಾವ

+ ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೇ, 1999ರ ಕರ್ನಾಟಕ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆಯ